**ರಾಜ್ಯೋತ್ಸವ ಪ್ರಶಸ್ತಿಗಳನ್ನು ನೀಡಲು ಇರುವ ಮಾನದಂಡಗಳು**

10 (32) ಶ್ರೀ ಖಾದರ್ ಯು.ಟಿ. (ಮಂಗಳೂರು): ಮಾನ್ಯ ಕನ್ನಡ ಮತ್ತು ಸಂಸ್ಕೃತಿ, ಸಣ್ಣನೀರಾವರಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗಳನ್ನು ರಾಜ್ಯದ ಸಾಹಿತಿಗಳಿಗೆ, ಕಲಾವಿದರುಗಳಿಗೆ, ಸಮಾಜ ಸೇವಕರು ಮತ್ತು ಹೋರಾಟಗಾರರಿಗೆ ನೀಡುವಲ್ಲಿ ಆಗುತ್ತಿರುವ ಲೋಪ-ದೋಷಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಲು ಯಾವ ಮಾನದಂಡವನ್ನು ಅನುಸರಿಸಲಾಗುತ್ತಿದೆ (ವಿವರ ನೀಡುವುದು);

ಇ) ಸ್ವಾಭಿಮಾನಿಗಳಾದ ಅರ್ಹರನ್ನು ಸರ್ಕಾರವೇ ನೇರವಾಗಿ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆ ಮಾಡಲು ಉದ್ದೇಶಿಸಿದೆಯೇ?

ಶ್ರೀ ಗೋವಿಂದ ಎಂ. ಕಾರಜೋಳ (ಕನ್ನಡ ಮತ್ತು ಸಂಸ್ಕೃತಿ, ಸಣ್ಣ ನೀರಾವರಿ ಹಾಗೂ ಜವಳಿ ಸಚಿವರು):

ಅ) ಇಲ್ಲ.

ಆ) ರಾಜ್ಯೋತ್ಸವ ಪ್ರಶಸ್ತಿ ಆಯ್ಕೆಗೆ ಸಮಿತಿ ಇದ್ದು ಈ ಸಮಿತಿಯು ವ್ಯಕ್ತಿಯ ಸಾಮಾಜಿಕ ಹಿನ್ನೆಲೆ, ನಿಷ್ಕಳಂಕ ಸೇವೆ ಹಾಗೂ ಸಮಾಜದಲ್ಲಿ ಅತ್ಯಂತ ಗಣನೀಯವಾದ ಸೇವೆಗೈದವರನ್ನು ಗುರುತಿಸಿ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡುತ್ತದೆ.

ಇ) ಆಯ್ಕೆ ಸಮಿತಿ ಶಿಫಾರಸ್ಸುಗಳನ್ವಯ ಕ್ರಮ ಕೈಗೊಳ್ಳಲಾಗುವುದು.

**ಸಣ್ಣ ಕೈಗಾರಿಕೆಗಳು ಉತ್ಪಾದಿಸುವ ಉತ್ಪನ್ನಗಳು**

11 (33) ಶ್ರೀ ಖಾದರ್. ಯು.ಟಿ. (ಮಂಗಳೂರು): ಮಾನ್ಯ ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಸಣ್ಣ ಕೈಗಾರಿಕೆಗಳು ಉತ್ಪಾದಿಸುವ ಉತ್ಪನ್ನಗಳನ್ನು ಸರ್ಕಾರಿ ಮತ್ತು ಅರೆ ಸರ್ಕಾರಿ ಸಂಸ್ಥೆಗಳು ಖರೀದಿಸುವ ಬಗ್ಗೆ ಸರ್ಕಾರ ಆದೇಶ ನಿಡಿದೆಯೇ;

ಆ) ಇಲ್ಲವಾದಲ್ಲಿ, ಸಣ್ಣ ಕೈಗಾರಿಕೆಗಳ ಬೆಳವಣಿಗೆಗಳಿಗೆ ಸರ್ಕಾರ ಯಾವ ರೀತಿಯ ಸಹಾಯ-ಸವಲತ್ತುಗಳನ್ನು ನೀಡುತ್ತಿದೆ; (ವಿವರ ಒದಗಿಸುವುದು)

ಇ) ಕಳೆದ ಮೂರು ವರ್ಷಗಳಿಂದ ಆರ್ಥಿಕ ನಷ್ಟದಿಂದ ಎಷ್ಟು ಸಣ್ಣ ಕೈಗಾರಿಕೆಗಳು ಮುಚ್ಚಿ ಹೋಗಿರುತ್ತವೆ: ಅವುಗಳು ಯಾವುವು?

ಶ್ರೀ ಸಿ.ಹೆಚ್. ವಿಜಯಶಂಕರ್ (ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು):

ಅ) ರಾಜ್ಯದ ಸಣ್ಣ ಕೈಗಾರಿಕೆಗಳು ಉತ್ಪಾದಿಸುವ ಉತ್ಪನ್ನಗಳನ್ನು ಸರ್ಕಾರಿ ಮತ್ತು ಅರೆ ಸರ್ಕಾರಿ ಸಂಸ್ಥೆಗಳು ನೇರವಾಗಿ ಖರೀದಿಸುವ ಬಗ್ಗೆ ಸರ್ಕಾರವು ಆದೇಶವನ್ನು ಹೊರಡಿಸಿರುವುದಿಲ್ಲ.

ಆ) ರಾಜ್ಯ ಸರ್ಕಾರವು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ಕೆ 1999 ಮತ್ತು ನಿಯಮಗಳು 2000ನ್ನು ಜಾರಿಗೆ ತಂದಿದ್ದು, ಸಾರ್ವಜನಿಕ ಅವಶ್ಯಕತೆ/ಅನುಕೂಲ ಮತ್ತು ಉಪಯೋಗಕ್ಕಾಗಿ ಅಗತ್ಯವಿರುವ ವಸ್ತುಗಳನ್ನು ಕೆ.ಟಿ.ಪಿ.ಪಿ ಕಾಯ್ದೆಯನುಗುಣವಾಗಿ ರಾಜ್ಯದ ಸಣ್ಣ ಕೈಗಾರಿಕೆಗಳಿಂದಲೂ ಖರೀದಿಸಲಾಗುತ್ತದೆ. ರಾಜ್ಯದ ನೋಂದಾಯಿತ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದ ಇಲಾಖೆಗಳ ಖರೀದಿಯಲ್ಲಿ ಶೇಕಡ 15ರ ದರ ಆದ್ಯತೆಯನ್ನು ನೀಡುವ ಮೂಲಕ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಯನ್ನು ಪ್ರೋತ್ಸಾಹಿಸುತ್ತಿದೆ.

ಸಣ್ಣ ಕೈಗಾರಿಕೆಗಳ ಬೆಳವಣಿಗೆಗೆ ರಾಜ್ಯವು 2009–14ರ ಕೈಗಾರಿಕಾ ನೀತಿ 2009–14ನ್ನು ಘೋಷಿಸಿದ್ದು, ಈ ಕೆಳಕಂಡ ಉತ್ತೇಜನ ಹಾಗೂ ರಿಯಾಯಿತಿಗಳನ್ನು ಕಲ್ಪಿಸಿದೆ.

- ಬಂಡವಾಳ ಹೂಡಿಕೆ ಉತ್ತೇಜನಾ ಸಹಾಯಧನ
- ಮುದ್ರಾಂಕ ಶುಲ್ಕ ವಿನಾಯ್ತು ಮತ್ತು ನೋಂದಣಿ ಶುಲ್ಕದಲ್ಲಿ ರಿಯಾಯಿತಿ
- ಭೂಮಿ ಪರಿವರ್ತನಾ ಶುಲ್ಕ ಮರುಪಾವತಿ
- ಪ್ರವೇಶ ತೆರಿಗೆ ವಿನಾಯಿತಿ
- ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿಗಳು
- ಕೃಷಿ ಉತ್ಪನ್ನ ಮಾರುಕಟ್ಟೆ ತೆರಿಗೆಯಿಂದ ವಿನಾಯಿತಿ
- ತ್ಯಾಜ್ಯವಸ್ತು ಸಂಸ್ಕರಣಾ ಘಟಕಗಳಿಗೆ ಸಹಾಯಧನ
- ವಿದ್ಯುತ್ ತೆರಿಗೆಯಿಂದ ವಿನಾಯಿತಿ
- ತಂತ್ರಜ್ಞಾನ ಮೇಲ್ದರ್ಜೆಗೇರಿಸಲು, ಗುಣಮಟ್ಟ ಪ್ರಮಾಣ ಪತ್ರ ಹಾಗೂ ಪೇಟೆಂಟ್ ನೋಂದಾಯಿಸಲು ಉತ್ತೇಜನ

- ಮಳೆ ಕೊಯ್ಲು, ಜಲ ಸಂರಕ್ಷಣೆ ಹಾಗೂ ಶಕ್ತಿ ಸಂರಕ್ಷಣೆಗೆ ಉತ್ತೇಜನ
- ಯೋಜನಾ ವರದಿ ತಯಾರಿಕೆಯ ವೆಚ್ಚದ ಮರುಪಾವತಿ ಸೇರಿದಂತೆ ಇನ್ನಿತರ ಸವಲತ್ತುಗಳು

ಇ) ಕಳೆದ ಮೂರು ವರ್ಷಗಳಿಂದ ಆರ್ಥಿಕ ನಷ್ಟದಿಂದ ಮುಚ್ಚಿರುವ ಕೈಗಾರಿಕೆಗಳ ಮಾಹಿತಿಯನ್ನು ಸಂಗ್ರಹಿಸಬೇಕಾಗಿರುತ್ತದೆ. ಅದಾಗ್ಯೂ 2006–07ನೇ ಸಾಲಿನಲ್ಲಿ ಕೈಗೊಂಡ 4ನೇ ಅಖಿಲ ಭಾರತ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕಾ ಸಮೀಕ್ಷೆ ಪ್ರಕಾರ ರಾಜ್ಯದಲ್ಲಿ 47,454 ಘಟಕಗಳು ಮುಚ್ಚಿರುವುದಾಗಿ ತಿಳಿದು ಬಂದಿರುತ್ತದೆ.

**ಜವಳಿ ಇಲಾಖೆಯ ಯೋಜನೆಯಡಿ ಸಹಾಯ – ಸವಲತ್ತು ನೀಡುವುದು**

13 (36) ಶ್ರೀ ಖಾದರ್ ಯು.ಟಿ (ಮಂಗಳೂರು): ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜವಳಿ ಇಲಾಖೆಯ ಯಾವ ಯೋಜನೆಗಳಡಿಯಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ಕುಟುಂಬಗಳಿಗೆ ಸರ್ಕಾರದ ಸಹಾಯ – ಸವಲತ್ತುಗಳು ದೊರಕುತ್ತಿವೆ; (ವಿವರಗಳನ್ನು ಒದಗಿಸುವುದು)

ಆ) ಕೇಂದ್ರ ಸರ್ಕಾರದಿಂದ ಜವಳಿ ಇಲಾಖೆಗೆ ಅನುದಾನ ನೀಡಲಾಗುತ್ತಿದೆಯೇ;

ಇ) ಕಳೆದ ಮೂರು ವರ್ಷಗಳಿಂದ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರ ಬಿಡುಗಡೆ ಮಾಡಿದ ಅನುದಾನವೆಷ್ಟು?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು):

ಅ) ಜವಳಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಈ ಕೆಳಕಂಡ ಯೋಜನೆಗಳಡಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ಕುಟುಂಬಗಳಿಗೆ ಸರ್ಕಾರದ ಸಹಾಯ ಸವಲತ್ತುಗಳನ್ನು ನೀಡಲಾಗುತ್ತಿದೆ.

1. ಸಮಗ್ರ ಕೈಮಗ್ಗ ಅಭಿವೃದ್ಧಿ ಯೋಜನೆ
2. ನೇಕಾರರ ವಿಶೇಷ ಪ್ಯಾಕೇಜ್